# ನಶೆಮುಕ್ತ ರಾಜ್ಯಕ್ಕೆ ಸರ್ಕಾರದಿಂದ ದಿಟ್ಟ ಹೆಜ್ಜೆ: ಪರಂ

## ನಶೆಮುಕ್ತ ಕರ್ನಾಟಕ ಅಭಿಯಾನ । ಡ್ರಗ್ಸ್ ವಿಷಯದಲ್ಲಿ ರಾಜ್ಯವನ್ನು ಪಂಜಾಬ್ ಆಗಲು ಬಿಡಲ್ಲ: ಸಚಿವ

■ **ಉದಯವಾಣಿ ಸಮಾಚಾರ**

**ಬೆಂಗಳೂರು:** ನಶೆಮುಕ್ತ ರಾಜ್ಯವನ್ನು ಕಟ್ಟಬೇಕಾದರೆ ಮೊದಲು ನಮ್ಮ ಕಾಲೇಜುಗಳು ನಶಾಮುಕ್ತವಾಗಬೇಕು. ಕರ್ನಾಟಕ ನಶಾಮುಕ್ತಗೊಳಿಸಲು ರಾಜ್ಯ ಸರ್ಕಾರ ಈಗಾಗಲೇ ಚಿಂತಿಸಿದ್ದು, ಸರ್ಕಾರದ ಮಟ್ಟದಲ್ಲಿ ಇದನ್ನು ನಿಗ್ರಹಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಉನ್ನತ ಶಿಕ್ಷಣ ಸಚಿವರಿಗೂ ಸೂಚನೆ ನೀಡಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ದಿಶಾಭೋದ್ ಫೌಂಡೇಶನ್, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಸಹಯೋಗದಲ್ಲಿ ಬುಧವಾರ ವಿಧಾನಸೌಧದಲ್ಲಿ ಹಮ್ಮಿಕೊಂಡಿದ್ದ ನಶೆಮುಕ್ತ ಭಾರತ, ನಶೆಮುಕ್ತ ಕರ್ನಾಟಕ, ನಶೆ ಮುಕ್ತ ಕ್ಯಾಂಪಸ್ ಹಾಗೂ ಅಂಗಾಂಗ ದಾನ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಾದಕ ವಸ್ತುಗಳ ವಿಷಯದಲ್ಲಿ ಕರ್ನಾಟಕವನ್ನು ಮತ್ತೊಂದು ಪಂಜಾಬ್ ಆಗಲು ಬಿಡುವುದಿಲ್ಲ. ಸಾರ್ವಜನಿಕರೂ ಕೂಡ ಇದಕ್ಕೆ ಆಸ್ಪದ ನೀಡಬಾರದು.



ನಶೆಮುಕ್ತ ಕರ್ನಾಟಕ ಅಭಿಯಾನದ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

> ನಶೆಮುಕ್ತ ಕ್ಯಾಂಪಸ್-ನಶೆಮುಕ್ತ ಕರ್ನಾಟಕ ನಿರ್ಮಿಸಲು ರಾಜೀವ್ ಗಾಂಧಿ ವಿವಿ ಮಾಡುತ್ತಿರುವ ಕೆಲಸ ಅನುಕರಣೀಯ. ರಾಜ್ಯದ ಪ್ರತಿ ವಿವಿವೂ ಈ ಕ್ರಮಗಳನ್ನು ಅನುಸರಿಸಬೇಕು ಎಂದು ಪತ್ರ ಬರೆಯಲಾಗುವುದು.
> ● **ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸಭಾಪತಿ**

ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಅಡಿಯಲ್ಲಿ ಸುಮಾರು 1500 ಆರೋಗ್ಯ ವಿಜ್ಞಾನಗಳ ಕಾಲೇಜುಗಳು ಕಾರ್ಯನಿರ್ವಹಿಸುತ್ತವೆ. ಮಾದಕ ವಸ್ತು ವಿರೋಧಿ ಸಮಿತಿಗಳನ್ನು ರಚಿಸುವಂತೆ ವಿಶ್ವವಿದ್ಯಾಲಯ ಈ ಎಲ್ಲಾ ಕಾಲೇಜಿಗಳಿಗೆ ಖಡಕ್ ಸೂಚನೆ ನೀಡಬೇಕು. ಇದನ್ನು ಗಂಭೀರವಾಗಿ ಪರಿಗಣಿಸದ ಕಾಲೇಜುಗಳ ಪರವಾನಗಿಗಳನ್ನು ರದ್ದುಗೊಳಿಸಬೇಕು ಎಂದು ಸೂಚಿಸಿದರು.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಅಂಗಾಂಗ ಸಂಗ್ರಹ ಕಸಿ ಹಾಗೂ ಅಂಗಾಂಗ ಶೇಖರಣಾ ಘಟಕಗಳನ್ನು ಹೆಚ್ಚು ಹೆಚ್ಚು ಸ್ಥಾಪಿಸಲು ಮತ್ತು ಈಗಾಗಲೇ ಇರುವ ಕೇಂದ್ರಗಳಿಗೆ ಹೆಚ್ಚಿನ ಉತ್ತೇಜನ ನೀಡಲು ಸರ್ಕಾರ ಚಿಂತಿಸಿದೆ. ಅಂಗಾಂಗ ದಾನ ಪ್ರತಿಜ್ಞೆಯಲ್ಲಿ ಕರ್ನಾಟಕ ದೇಶದಲ್ಲಿ 3ನೇ ಸ್ಥಾನದಲ್ಲಿದೆ. ಈ ಸಂಖ್ಯೆಯನ್ನು ಹೆಚ್ಚಿಸಲು ಸಾಮೂಹಿಕ ಪ್ರಯತ್ನ ಹಾಗೂ ಮನಸ್ಥಿತಿಯಲ್ಲಿ ಬದಲಾವಣೆ ಬಹಳ ಮುಖ್ಯ. ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳು ನಶೆ ಮುಕ್ತ ಕ್ಯಾಂಪಸ್ ಕಾರ್ಯಕ್ರಮ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರ್‌ಜಿಯುಎಚ್‌ಎಸ್ ಕುಲಪತಿ ಡಾ. ಭಗವಾನ್ ಬಿ.ಸಿ., ಶಾಸಕ ರಿಜ್ವಾನ್ ಅರ್ಷದ್, ಎನ್‌ಸಿಬಿ ವಲಯ ನಿರ್ದೇಶಕ ಸಚಿನ್ ಘೋರ್ಪಡೆ, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್, ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕಿ ಡಾ. ಬಿ. ಎಲ್. ಸುಜಾತಾ ರಾಥೋಡ್, ವಿವಿಯ ಕುಲಸಚಿವ ಅರ್ಜುನ್ ಒಡೆಯರ್, ದಿಶಾಭೋದ್ ಫೌಂಡೇಶನ್ ನಿರ್ದೇಶಕಿ ಡಾ. ಕೆ. ಹರಿತ ಮತ್ತಿತರರು ಉಪಸ್ಥಿತರಿದ್ದರು.

# ಮಾದಕ ವಸ್ತು: ಕ್ರಮ ಕೈಗೊಳ್ಳದ ಕಾಲೇಜುಗಳ ಮಾನ್ಯತೆ ರದ್ದು



ಬೆಂಗಳೂರು: 'ಮಾದಕ ವಸ್ತು ಪ್ರಕರಣಗಳ ತಡೆಗೆ ಅಗತ್ಯ ಕ್ರಮ ಕೈಗೊಳ್ಳದ ಕಾಲೇಜುಗಳ ಮಾನ್ಯತೆ ರದ್ದತೆ ರದ್ದುಪಡಿಸುವ ಕುರಿತು ಚಿಂತನೆ ನಡೆಸಿದ್ದು, ಉನ್ನತ ಶಿಕ್ಷಣ ಸಚಿವರ ಜತೆಗೂ ಚರ್ಚಿಸಲಾಗಿದೆ' ಎಂದು ಗೃಹ ಸಚಿವ ಜಿ.ಪರಮೇಶ್ವರ ಹೇಳಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ದಿಶಾಭೋದ್ ಫೌಂಡೇಶನ್, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೊ ಬುಧವಾರ ಆಯೋಜಿಸಿದ್ದ ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್, ಅಂಗಾಂಗ ದಾನ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಜ್ಯವನ್ನು ಸಂಪೂರ್ಣ ಮಾದಕದ್ರವ್ಯ ಮುಕ್ತಗೊಳಿಸಲು ಸರ್ಕಾರ ಗಂಭೀರ ಚಿಂತನೆ ನಡೆಸಿದೆ. ಈ ಆಶಯ ಈಡೇರಲು ಮೊದಲು ಕಾಲೇಜು ಕ್ಯಾಂಪಸ್‌ಗಳು ನಶೆ ಮುಕ್ತವಾಗಬೇಕು. ರಾಜೀವ್ ಗಾಂಧಿ ವಿಶ್ವವಿದ್ಯಾಲಯ ಕೈಗೊಂಡಿರುವ ಅಭಿಯಾನಕ್ಕೆ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ. ಮಾದಕ ದ್ರವ್ಯದ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳದ, ಪ್ರಕರಣಗಳು ವರದಿಯಾಗುವ ಕಾಲೇಜುಗಳ ಮಾನ್ಯತೆ ರದ್ದು ಮಾಡಲಾಗುವುದು. ಅದಕ್ಕಾಗಿ ಪ್ರತಿ ಕಾಲೇಜಿನಲ್ಲೂ ಮಾದಕ ದ್ರವ್ಯ ವಿರೋಧಿ ಸಮಿತಿಗಳನ್ನು ರಚಿಸುವಂತೆ ಸೂಚಿಸಲಾಗಿದೆ ಎಂದು ಹೇಳಿದರು. ಮಾದಕ ದ್ರವ್ಯ ಜಾಲವು ಕರ್ನಾಟಕವನ್ನು ಮತ್ತೊಂದು ಉಡ್ತಾ ಪಂಜಾಬ್ ಮಾಡಲು ಹೊರಟಿದೆ. ಜನರು ಅದಕ್ಕೆ ಆಸ್ಪದ ನೀಡಬಾರದು. ಸರ್ಕಾರವೂ ನೀಡುವುದಿಲ್ಲ. ಮಾದಕದ್ರವ್ಯ ಮುಕ್ತ ಅಭಿಯಾನಕ್ಕೆ ಯುವಜನರು, ಪೋಷಕರು, ಅಧ್ಯಾಪಕರು, ಶಿಕ್ಷಣ ಸಂಸ್ಥೆಗಳ ಸಹಕಾರ ಅಗತ್ಯ. ಬೇರೆ ದೇಶ, ರಾಜ್ಯಗಳಿಂದ ಬರುವ ಮಾದಕ ಪದಾರ್ಥಗಳನ್ನು ತಡೆಯಲು ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ. ಕೋಟ್ಯಂತರ ಮೌಲ್ಯದ ಮಾದಕ ದ್ರವ್ಯ ಪದಾರ್ಥಗಳನ್ನು ವಶಕ್ಕೆ ಪಡೆದು ಸುಟ್ಟು ಹಾಕಲಾಗಿದೆ ಎಂದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಶಾಸಕ ರಿಜ್ವಾನ್ ಅರ್ಷದ್, ವೈದ್ಯಕೀಯ ಶಿಕ್ಷಣ ಇಲಾಖೆ ನಿರ್ದೇಶಕಿ ಸುಜಾತಾ ರಾಥೋಡ್ ಉಪಸ್ಥಿತರಿದ್ದರು.

# HM: Govt won't allow drug mafia to make K'taka 'another Punjab'

BENGALURU, DHNS

Home Minister G Parameshwara on Wednesday said that the state government will not allow the drug mafia to make Karnataka 'another Punjab'.

Speaking at the launch of a campaign organised by the Rajiv Gandhi University of Health Sciences (RGUHS) to make college campuses and Karnataka drug-free, Parameshwara said, "We aim to make Karnataka a drug-free state. People's cooperation is very important to achieve that g oal."

Appreciating the efforts being made by the university, the minister said that college campuses must be drug-free to build a drug-free state.

"The campaign by RGUHS is an important one. The state government will support it completely," Parameshwara added.

He directed the university to instruct all affiliated colleges to constitute anti-drug committees.

"There are over 1,500 colleges under RGUHS. If any college fails to constitute an anti-drug committee, then measures should be taken to withdraw their affiliation," the minister said.

He said foreign students are responsible for drugs reaching the state. "The government has kept an eye on foreign students and their activities," he stated.

He revealed that soon advertisements and awareness about drugs and narcotics will be displayed on the government buses.



Home Minister G Parameshwara, Legislative Council Chairman Basavaraj Horatti, Health Minister Dinesh Gundu Rao and RGUHS Vice Chancellor Dr Bhagawan B C release the poster of the 'Drug-free Karnataka' campaign in Bengaluru on Wednesday. DH PHOTO

## 'More organ retrieval centres'

Speaking at the event, Health and Family Welfare Minister Dinesh Gundu Rao said that the government is seriously considering increasing the number of organ retrieval centres at the government hospitals.

Vice Chancellor Dr Bhagawan B C requested the government to establish the organ retrieval centres at all government medical college hospitals and also to strengthen those already established.